481(851) ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ವೃತ್ತಿ ಶಿಕ್ಷಣಕ್ಕೆ ಸಂಬಂಧಿಸಿದ ಸಿ ಇ ಟಿ ಮತ್ತು ಕಾಮೆಡ್-ಕೆ ಸೇರಿ ಒಂದೇ ಪ್ರವೇಶ ಪರೀಕ್ಷೆ ನಡೆಸುವ ಪ್ರಸ್ತಾವ ಸರ್ಕಾರದ ಮುಂದಿರುವುದು ನಿಜವೆ,

ಆ) ಹಾಗಿದ್ದಲ್ಲಿ, ಈ ಪ್ರಸ್ತಾವ ಯಾವ ಹಂತದಲ್ಲಿದೆ,

ಇ) 2007-08ನೇ ಸಾಲಿನಿಂದ ಒಂದೇ ಪ್ರವೇಶ ಪರೀಕ್ಷೆ ನಡೆಸಲು ಸರ್ಕಾರ ಯಾವಾಗ ಅಧಿಸೂಚನೆ ಹೊರಡಿಸುವುದು?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ) ಒಂದೇ ಪ್ರವೇಶ ಪರೀಕ್ಷೆ ನಡೆಸುವ ಕುರಿತಂತೆ ಸರ್ಕಾರದ ಚಿಂತನೆಯಲ್ಲಿದೆ ಈ ಬಗ್ಗೆ ವೃತ್ತಿಪರ ಕಾಲೇಜುಗಳ ಆಡಳಿತ ಮಂಡಳಿಯವರೊಂದಿಗೆ ಮಾತುಕತೆ ನಡೆಯುತ್ತಿದೆ

ಇ) ಮಾತುಕತೆಯು ಅಂತಿಮಗೊಂಡು ಒಮ್ಮತದ ತೀರ್ಮಾನ ತೆಗೆದುಕೊಂಡಲ್ಲಿ ಕೂಡಲೇ ಅಧಿಸೂಚನೆ ಹೊರಡಿಸಲಾಗುವುದು

482(852) ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಅನಧಿಕೃತ ಶಾಲೆಗಳೆಂದು ಗುರುತಿಸಲ್ಪಟ್ಟ ಶಾಲೆಗಳ ಸಂಖ್ಯೆ ಎಷ್ಟು, (ತಾಲ್ಲೂಕುವಾರು ವಿವರ ನೀಡುವುದು)

ಆ) ಈ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು, ಇವರ ವಿದ್ಯಾಭ್ಯಾಸಕ್ಕೆ ಸರ್ಕಾರ ಯಾವ ಪರ್ಯಾಯ ಕ್ರಮ ಕೈಗೊಳ್ಳಲಿದೆ,

ಇ) ಈ ಶಾಲೆಗಳು ಯಾವ ಮಾಧ್ಯಮದಲ್ಲಿ ನಡೆಯುತ್ತಿವೆ,

(ಈ) ಈ ಅನಧಿಕೃತ ಶಾಲೆಗಳು ನಡೆಯಲು ಕಾರಣರಾದವರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ?